# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 496 |
| ಸದಸ್ಯರ ಹೆಸರು | : | ಶ್ರೀ ಎನ್. ರವಿಕುಮಾರ್<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 30.01.2026 |
| ಉತ್ತರಿಸುವ ಸಚಿವರು | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ<br>ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿ ಕನ್ನಡ ಮಾತನಾಡುವವರ ಸಂಖ್ಯೆ ಶೇ.52% ಕ್ಕಿಂತಲೂ ಕಡಿಮೆ ಮತ್ತು ರಾಜ್ಯದಲ್ಲಿ ಸುಮಾರು ಶೇ. 68% ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಈ ಕುರಿತು ಸರ್ಕಾರದ ನಿಲುವೇನು: | ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| (ಆ) | ಕನ್ನಡ ರಾಜ್ಯ ಆಡಳಿತ ಭಾಷೆಯಾಗಿದ್ದರೂ ಸಹ ಸರ್ಕಾರವೇ ಹಲವಾರು ಆದೇಶಗಳನ್ನು ಆಂಗ್ಲ ಭಾಷೆಯಲ್ಲಿ ಹೊರಡಿಸುತ್ತಿರುವುದು ಕನ್ನಡ ಭಾಷೆಗೆ ಅಪಮಾನ ಮಾಡಿದಂತಲ್ಲವೇ: ಸರ್ಕಾರದ ಕಾರ್ಯದರ್ಶಿ ಮಟ್ಟದ ಅಧಿಕಾರಿಗಳು ಕಡತದ ಟಿಪ್ಪಣಿಯನ್ನು ಆಂಗ್ಲ ಭಾಷೆಯಲ್ಲಿ ಬರೆಯುತ್ತಿರುವ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ: | ಸರ್ಕಾರವು ಯಾವುದೇ ಆದೇಶವನ್ನು ಕನ್ನಡ ಹೊರತುಪಡಿಸಿ ಕೇವಲ ಆಂಗ್ಲ ಭಾಷೆಯಲ್ಲಿ ಹೊರಡಿಸುವುದು ಮತ್ತು ಅಧಿಕಾರಿಗಳು ಆಂಗ್ಲ ಭಾಷೆಯಲ್ಲಿ ಕಡತದ ಟಿಪ್ಪಣಿ ಮಾಡಿಸುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಗಮನಕ್ಕೆ ಬಂದ ಕೂಡಲೇ ಸಂಬಂಧಿಸಿದ ಅಧಿಕಾರಿಗಳಿಗೆ ಕನ್ನಡ ಭಾಷೆಯಲ್ಲಿ ಹೊರಡಿಸಲು ಸೂಚಿಸಲಾಗುತ್ತದೆ. |
| ಇ) | ಕೆ.ಪಿ.ಎಸ್.ಸಿ ಹಾಗೂ ಕೆ.ಇ.ಎ. ಮುಖಾಂತರ ಸರ್ಕಾರಿ ನೌಕರರ ನೇಮಕಾತಿಗಾಗಿ ನಡೆಯುವ ಪರೀಕ್ಷೆಗಳು ಕನ್ನಡ ಮಾಧ್ಯಮದಲ್ಲಿ ಮಾತ್ರವೇ ನಡೆಸಲು ಸರ್ಕಾರ ಕೈಗೊಂಡ ಕ್ರಮಗಳೇನು: ಆಡಳಿತ ಭಾಷೆ ಕನ್ನಡ ಎಂದ ಮೇಲೆ ಇಂಗ್ಲೀಷ್ ಭಾಷೆಯ ಪರೀಕ್ಷೆ ನಡೆಸುವ ಅವಶ್ಯಕತೆ ಇದೆಯೇ: ಈ ಕುರಿತು ಸರ್ಕಾರದ ನಿಲುವೇನು: (ವಿವರ ನೀಡುವುದು) | ಕೆ.ಪಿ.ಎಸ್.ಸಿ ಹಾಗೂ ಕೆ.ಇ.ಎ ಎರಡೂ ಕೇವಲ ಆಯ್ಕೆ ಪ್ರಾಧಿಕಾರಗಳಾಗಿದ್ದು, ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಅಧಿಸೂಚನೆ / ಆದೇಶ / ಸುತ್ತೋಲೆಗಳನ್ವಯ ಹಾಗೂ ಸಂಬಂಧಪಟ್ಟ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನೇಮಕಾತಿ ಪ್ರಕ್ರಿಯೆಗಳನ್ನು ಕೈಗೊಳ್ಳಲಾಗುತ್ತದೆ.<br><br>ಸರ್ಕಾರಿ ನೌಕರರ ನೇಮಕಾತಿಗಾಗಿ ನಡೆಯುವ ಪರೀಕ್ಷೆಗಳು ಕನ್ನಡ ಮಾಧ್ಯಮದಲ್ಲಿ ಮಾತ್ರವೇ ನಡೆಸುವ ಬಗ್ಗೆ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಈ) | ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಿಗೆ ಕನ್ನಡ ಭಾಷೆ ಕಡ್ಡಾಯ ಕುರಿತು ಇಲಾಖೆಯ ನಿಲುವೇನು? (ವಿವರ ನೀಡುವುದು) | ಈ ರೀತಿಯ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |

ಸಂಖ್ಯೆ: ಕಸಂವಾ 07 ಕೆಓಎಲ್ ಆಕ 2026

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು